ಕಛೇರಿಯಲ್ಲಿ ಕಾರ್ಯರೂಪಕ್ಕೆ ತರಲಾಗಿದೆ. ಹೆಚ್ಚುವರಿ ನೌಕರರುಗಳನ್ನು ಇತರೇ ಕಂದಾಯ ಕಛೇರಿಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇಮಕ ಮಾಡಲಾಗಿದೆ.

ಅನುಕಂಪದ ಆಧಾರದ ಮೇಲೆ ನೇಮಕಾತಿ

539 - ಶ್ರೀ ಕೆ.ಎನ್. ಸುಬ್ಬಾರೆಡ್ಡಿ (ಬಸವನಗುಡಿ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಕರ್ನಾಟಕ ಆಗ್ರೋ ಇಂಡಸ್ಟ್ರೀಸ್ ಕಾರ್ಪೋರೇಷನ್, ಬೆಂಗಳೂರು ಇದು ಅಸ್ತಿತ್ವದಲ್ಲಿದೆಯೇ? ಹಾಗಿದ್ದಲ್ಲಿ ಸದರಿ ಕಾರ್ಪೋರೇಷನ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು?

ಆ) ಕಳೆದ 3 ವರ್ಷಗಳಲ್ಲಿ ಅನುಕಂಪದ ಆಧಾರದ ಮೇಲೆ ಕೆಲಸ ಕೋರಿ ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು?

ಇ) ಅವುಗಳ ಪೈಕಿ ಪರಿಗಣಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು?

ಈ) ಅನುಕಂಪದ ಆಧಾರದ ಮೇಲೆ ನೇಮಕಾತಿಗೆ ಅವಕಾಶವಿಲ್ಲದಿದ್ದಲ್ಲಿ ಬದಲಿ ವ್ಯವಸ್ಥೆ ಮಾಡಲು ನಿಯಮಾವಳಿಗಳಲ್ಲಿ ತಿದ್ದುಪಡಿ ಮಾಡಲಾಗಿದೆಯೇ?

ಉ) ಹಾಗಿಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಟಿ.ಬಿ. ಜಯಚಂದ್ರ (ಕೃಷಿ ಸಚಿವರು) :

ಅ) ಇದೆ. ಹಾಲಿ ಸಂಸ್ಥೆಯಲ್ಲಿ 946 ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ.

ಆ) 35 ಅರ್ಜಿಗಳು

ಇ) ಯಾವ ಅರ್ಜಿಯನ್ನೂ ಪರಿಗಣಿಸಿರುವುದಿಲ್ಲ.

ಈ) ಕೆ.ಎ.ಐ.ಸಿ. ಸೇವಾ ನಿಯಮ 2.13 (ಸಿ)ರಂತೆ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಮರಣ ಹೊಂದಿದ ವ್ಯಕ್ತಿಗಳ ಅವಲಂಬಿತರಿಗೆ ರೂ. 25,000-00ಗಳವರೆಗೆ ಪರಿಹಾರ ಧನ ಮಂಜೂರು ಮಾಡಲಾಗುತ್ತಿದೆ.

ಉ) ಉದ್ಭವಿಸುವುದಿಲ್ಲ.

ಮಹಿಳಾ ಆಯೋಗಕ್ಕೆ ಒದಗಿಸಲಾದ ಹಣ

540 - ಶ್ರೀ ಕೆ.ಎಸ್. ಸುಬ್ಬಾರೆಡ್ಡಿ (ಬಸವನಗುಡಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಸ್ತಿತ್ವದಲ್ಲಿ ಇದೆಯೇ?

ಅ) ಸರ್ಕಾರ ಇದುವರೆವಿಗೂ ಈ ಆಯೋಗಕ್ಕೆ ಮಾಡಿರುವ ಖರ್ಚು ಎಷ್ಟು?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಹೌದು.

ಆ) ವಿವರಗಳು ಈ ಕೆಳಕಂಡಂತಿವೆ :

ಆರ್ಥಿಕ ವರ್ಷ	ಒದಗಿಸಲಾಗಿರುವ ಅನುದಾನ (ರೂ.ಲಕ್ಷಗಳಲ್ಲಿ)	ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ)
1996-97	20.00	20.00
1997-98	50.00	25.00
1998-99	40.00	40.00
1999-2000	40.00	40.00

ಅಂಗನವಾಡಿ ಕಾರ್ಯಕರ್ತೆಯರ ಗೌರವಧನ ಹೆಚ್ಚಿಸುವ ಬಗ್ಗೆ

541- ಶ್ರೀ ಸದಾನಂದಗೌಡ ಡಿ.ವಿ. (ಪುತ್ತೂರು) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಂಗನವಾಡಿ ಕಾರ್ಯಕರ್ತೆಯರ ಗೌರವಧನ ಹೆಚ್ಚಳದ ಬಗ್ಗೆ ತೆಗೆದುಕೊಂಡ ಕ್ರಮವೇನು?

ಆ) ಅವರಿಗೆ ನಿಗಧಿಪಡಿಸಿರುವ ಗೌರವಧನವು ಕನಿಷ್ಠ ವೇತನ ಕಾಯಿದೆಯನ್ವಯ ಇದೆಯೇ?

ಇ) ಇಲ್ಲದಿದ್ದಲ್ಲಿ ಕನಿಷ್ಠ ವೇತನ ಕಾಯಿದೆಯನ್ವಯ ಗೌರವಧನವನ್ನು ಪಾವತಿಸದೇ ಇರಲು ಕಾರಣವೇನು?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು.) :

ಅ) ಇತ್ತೀಚಿಗೆ ಅಂದರೆ ದಿನಾಂಕ : 1-6-99 ರಿಂದ ಅನ್ವಯವಾಗುವಂತೆ ಮಾಹೆಯಾನ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.150.00 ಮತ್ತು ಸಹಾಯಕರಿಗೆ ರೂ.75.00 ಗಳಂತೆ ಹೆಚ್ಚಿಸುವುದಕ್ಕೆ ಸರ್ಕಾರದ ಆದೇಶ ದಿನಾಂಕ : 6-7-99 ರಲ್ಲಿ ಮಂಜೂರಾತಿ ನೀಡಿದೆ.

ಆ) ಇಲ್ಲ.

ಇ) ಭಾರತ ಸರ್ಕಾರದ ಮಾರ್ಗಸೂಚಿಗಳಂತೆ ಅಂಗನವಾಡಿ ಕಾರ್ಯಕರ್ತೆಯರು ಗೌರವಧನ ಆಧಾರಿತ ಕಾರ್ಯಕರ್ತೆಯರಾಗಿರುತ್ತಾರೆ. ಆದ್ದರಿಂದ ಕನಿಷ್ಠ ವೇತನ ಕಾಯಿದೆಯು ಇವರಿಗೆ ಅನ್ವಯಿಸುವುದಿಲ್ಲ.